# All India Radio: Bangalore
# Regional Bulletin In Kannada
# 30.01.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**ಮುಖ್ಯಾಂಶಗಳು**

1. **ಮಹಾತ್ಮಾಗಾಂಧೀಜಿಯವರ ಪುಣ್ಯಸ್ಮರಣೆ ಅಂಗವಾಗಿ ದೇಶಾದ್ಯಂತ ಇಂದು ಹುತಾತ್ಮರ ದಿನ ಆಚರಣೆ**
2. **ಸಣ್ಣ ಹಣಕಾಸು ಸಂಸ್ಥೆಗಳಿಂದ ಕಿರುಕುಳ ತಪ್ಪಿಸಲು ಜಿಲ್ಲಾ ಮಟ್ಟದಲ್ಲಿ ಸಹಾಯವಾಣಿ ಕೇಂದ್ರ**
3. **ಕುಷ್ಠರೋಗ ನಿರ್ಮೂಲನೆಗಾಗಿ ಇಂದಿನಿಂದ ರಾಜ್ಯಾದ್ಯಂತ 'ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ'**
4. **ರಾಷ್ಟ್ರೀಯ ಕ್ರೀಡಾಕೂಟ : ಮಹಿಳೆಯರ ಸೈಕ್ಲಿಂಗ್ ವಿಭಾಗದಲ್ಲಿ ರಾಜ್ಯದ ಮೇಘಾ ಗೂಗಾಡಗೆ ಕಂಚು**

****************

ಮಹಾತ್ಮ ಗಾಂಧೀಜಿಯವರ ತತ್ವಾದರ್ಶಗಳು ಇಂದಿಗೂ ಪ್ರಸ್ತುತ. ತಮ್ಮ ಜೀವನವೇ ಒಂದು ಸಂದೇಶ ಎಂದು ನುಡಿದಿದ್ದ ಗಾಂಧೀಜಿಯವರ ಹೋರಾಟದ ಬದುಕು ಪ್ರೇರಣಾದಾಯಕ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹುತಾತ್ಮರ ದಿನಾಚರಣೆ ಹಿನ್ನೆಲೆಯಲ್ಲಿ ವಿಧಾನಸೌಧದಲ್ಲಿ ಇಂದು ಮಹಾತ್ಮಾ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಅವರು ಮಾತನಾಡಿದರು.

ಸತ್ಯ, ಅಹಿಂಸೆಗಳ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾನ್ ವ್ಯಕ್ತಿ ಮಹಾತ್ಮಾ ಗಾಂಧೀಜಿ. ತಳಮಟ್ಟದಿಂದ ದೇಶವನ್ನು ಅರಿಯಲು ಮೊದಲು ಪ್ರಯತ್ನಿಸಿದ ಅವರು, ನಂತರ ದೇಶದ ಜನರನ್ನು ಬ್ರಿಟೀಷರ ದಾಸ್ಯದಿಂದ ಮುಕ್ತಗೊಳಿಸಿದರು ಎಂದರು. ಮಹಾತ್ಮ ಗಾಂಧೀಜಿ ಪುಣ್ಯ ಸ್ಮರಣೆಯ ದಿನವಾದ ಇಂದು **ಬೆಂಗಳೂರು ಗ್ರಾಮಾಂತರ** ಜಿಲ್ಲೆಯಲ್ಲಿ ವಿವಿಧೆಡೆ ಹುತಾತ್ಮರ ದಿನಾಚರಣೆಯನ್ನು ಆಚರಿಸಲಾಯಿತು. ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ವಿವಿಧ ಸಂಘಟನೆಗಳಿಂದ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಗಾಂಧೀಜಿ ಅವರ ಅಹಿಂಸಾ ತತ್ವ, ತ್ಯಾಗ ಹಾಗೂ ಹೋರಾಟಗಳನ್ನು ಸ್ಮರಿಸಲಾಯಿತು.

ತತ್ವ, ಸಿದ್ಧಾಂತ, ಮೌಲ್ಯಗಳಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಇಡೀ ವಿಶ್ವದ ನಾಯಕರಾಗಿದ್ದಾರೆ ಎಂದು **ವಿಜಯಪುರ** ಜಿಲ್ಲಾಧಿಕಾರಿ ಟಿ. ಭೂಬಾಲನ್ ಹೇಳಿದ್ದಾರೆ. ವಿಜಯಪುರ ನಗರದ ಮಹಾತ್ಮ ಗಾಂಧಿ ಭವನದಲ್ಲಿ 'ಸರ್ವೋದಯ ದಿನ'ದ ನಿಮಿತ್ತ ಬಾಪೂಜಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಅಮೆರಿಕದ ಡಾಕ್ಟರ್ ಮಾರ್ಟಿನ್ ಲೂಥರ್ ಕಿಂಗ್ ಜ್ಯುನಿಯರ್, ದಕ್ಷಿಣ ಆಫ್ರಿಕಾದ ನೆಲ್ಸನ್ ಮಂಡೇಲಾ, ಬರ್ಮಾದ ಆಂಗ್ ಸಾನ್ ಸೂಕಿ ಹೀಗೆ ಜಗತ್ತಿನ ನಾಯಕರಿಗೆ ಗಾಂಧೀಜಿ ಸ್ಫೂರ್ತಿಯಾಗಿದ್ದಾರೆ ಎಂದರು.

****************

ಮಹಾತ್ಮಗಾಂಧೀಜಿಯವರ ಸಂದೇಶಗಳನ್ನು ಪ್ರಚಾರ ಮಾಡಲು ರಾಜ್ಯದಾದ್ಯಂತ ವರ್ಷಪೂರ್ತಿ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಕಾರ್ಯಕ್ರಮವನ್ನು ಆಯೋಜಿಸುವ ಆಲೋಚನೆ ರಾಜ್ಯ ಸರ್ಕಾರದ ಮುಂದಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಹುತಾತ್ಮರ ದಿನಾಚರಣೆ ಅಂಗವಾಗಿ ಬೆಂಗಳೂರಿನ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಾಂಧಿ ಭಾರತ ಕಾರ್ಯಕ್ರಮ ಆಚರಣಾ ಸಮಿತಿ ನೀಡಿರುವ ವರದಿ ಅನುಷ್ಠಾನದ ಬಗ್ಗೆ ಮುಖ್ಯಮಂತ್ರಿಯವರು ತೀರ್ಮಾನಿಸಲಿದ್ದಾರೆ. ಇದರ ಬಗ್ಗೆ ಎಐಸಿಸಿ ಅಧ್ಯಕ್ಷರ ಬಳಿಯೂ ಮನವಿ ಮಾಡಲಾಗಿದೆ ಎಂದರು.

ಬಿಜೆಪಿಯವರು ಗಾಂಧಿಯವರ ಹೆಜ್ಜೆ ಗುರುತುಗಳನ್ನು ಅಳಿಸುವ ಕೆಲಸ ಮಾಡುತ್ತಿದ್ದಾರೆ. ನಾವು ಅದನ್ನು ಉಳಿಸುವ ಕೆಲಸ ಮಾಡಬೇಕು. ಮಹಾತ್ಮ ಗಾಂಧಿ ಅವರ ತತ್ವಗಳನ್ನು ಒಪ್ಪದ ಬಿಜೆಪಿಯವರು, ಅವರ ಪ್ರತಿಮೆ ಕೆಳಗೆ ಕುಳಿತು ಪ್ರತಿಭಟನೆ ಮಾಡುತ್ತಾರೆ ಎಂದು ಇದೇ ವೇಳೆ ಡಿ.ಕೆ.ಶಿವಕುಮಾರ್ ದೂರಿದರು.

****************

ಸಣ್ಣ ಹಣಕಾಸು ಸಂಸ್ಥೆಗಳು ಸಾಲ ವಸೂಲಾತಿ ಸಂದರ್ಭದಲ್ಲಿ ಕಿರುಕುಳ ನೀಡಿದರೆ 08232– 224655 ಸಹಾಯವಾಣಿಗೆ ಕರೆ ಮಾಡಿ, ದೂರು ಸಲ್ಲಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್, ಜಿಲ್ಲೆಯ ನಾಗರಿಕರಿಗೆ ತಿಳಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಸಣ್ಣ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಯಾವುದೇ ವ್ಯಕ್ತಿಯನ್ನು ನಿಂದನೆ ಮಾಡಲು ಸಮಾಜದಲ್ಲಿ ಅವಕಾಶವಿಲ್ಲ. ಸಾಲ ಮರುಪಾವತಿ ಮಾಡದೆ ಇರುವವರನ್ನು ಅವಾಚ್ಯ ಪದಗಳಿಂದ ನಿಂದಿಸುವುದು, ಮನೆಯ ಗೋಡೆಯ ಮೇಲೆ ಬರೆಯುವ ಪ್ರಕರಣಗಳು ಕಂಡುಬಂದಲ್ಲಿ, ಪೊಲೀಸ್ ಇಲಾಖೆಯು ಸ್ವ–ಪ್ರೇರಣೆಯಿಂದ ಎಫ್.ಐ.ಆರ್ ದಾಖಲಿಸಲಿದೆ ಎಂದು ಎಚ್ಚರಿಕೆ ನೀಡಿದರು.

ಸಣ್ಣ ಹಣಕಾಸು ಸಂಸ್ಥೆಗಳ ವಿರುದ್ಧ ಬರುವ ದೂರುಗಳನ್ನು ಪರಿಶೀಲಿಸಲು, ಜಿಲ್ಲಾ ಮಟ್ಟದಲ್ಲಿ ಲೀಡ್ ಬ್ಯಾಂಕ್ ವ್ಯವಸ್ಥಾಪಕರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ. ತಾಲೂಕು ಮಟ್ಟದಲ್ಲಿ ಸಹ ತಾಲೂಕು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗುವುದು ಎಂದು ಅವರು ತಿಳಿಸಿದರು. ಸಾಲ ವಸೂಲಾತಿ ಮಾಡಲು ಆರ್.ಬಿ.ಐ ನಿಯಮಗಳಿವೆ. ನಿಯಮ ಉಲ್ಲಂಘಿಸಿದರೆ, ಸಣ್ಣ ಹಣಕಾಸು ಸಂಸ್ಥೆಗಳ ವಿರುದ್ಧ ಸ್ಥಳೀಯವಾಗಿ ದೂರು ದಾಖಲಿಸುವುದರ ಜೊತೆಗೆ ಕ್ರಮ ಕೈಗೊಳ್ಳುವಂತೆ ಆರ್.ಬಿ.ಐ ಗೆ ಪತ್ರ ಬರೆಯಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದರು.

****************

ಹಾವೇರಿ ಜಿಲ್ಲೆಯಲ್ಲಿ ಸಣ್ಣ ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ಕಿರುಕುಳ ಹಾಗೂ ದೌರ್ಜನ್ಯದ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಜಿಲ್ಲಾಡಳಿತ ಸಹಾಯವಾಣಿ ಆರಂಭಿಸಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

ಸಾಲ ವಸೂಲಾತಿ ನೆಪದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವ ಪ್ರಕರಣಗಳಿದ್ದರೆ, 08375–249102 ಸಂಖ್ಯೆಗೆ ಕರೆ ಮಾಡಿ, ದೂರು ನೀಡಬಹುದು. ದಿನದ 24 ಗಂಟೆಯೂ ಸಹಾಯವಾಣಿ ಕಾರ್ಯನಿರ್ವಹಿಸಲಿದ್ದು, ಮೂರು ಪಾಳಿಯಲ್ಲಿ ಸಿಬ್ಬಂದಿ ಕೆಲಸ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದರು. ಸಹಾಯವಾಣಿಗೆ ಬರುವ ಎಲ್ಲ ದೂರು ಮತ್ತು ಮಾಹಿತಿಗಳನ್ನು ದಾಖಲಿಸಿಕೊಂಡು, ಆಯಾ ತಾಲೂಕಿನ ತಹಸೀಲ್ದಾರ್ ಹಾಗೂ ಪೊಲೀಸ್ ಇಲಾಖೆಗೆ ಮಾಹಿತಿ ನೀಡಲಾಗುವುದು. ಸಹಾಯವಾಣಿ ಉಸ್ತುವಾರಿಯಾಗಿ ಸಹಕಾರ ಸಂಘಗಳ ಉಪ ನಿಬಂಧಕರನ್ನು ನಿಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

****************

**ಹಾವೇರಿ** ಜಿಲ್ಲೆಯಲ್ಲಿ 272 ತಂಡಗಳ ಮೂಲಕ ನಡೆಸಿದ ಸಮೀಕ್ಷೆಯಲ್ಲಿ 76 ಕುಷ್ಠರೋಗಿಗಳು ಪತ್ತೆಯಾಗಿದ್ದಾರೆ ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾಕ್ಟರ್ ಚನ್ನಬಸಯ್ಯ ವಿರಕ್ತಮಠ ತಿಳಿಸಿದ್ದಾರೆ. ರಾಷ್ಟ್ರೀಯ ಆರೋಗ್ಯ ಅಭಿಯಾನದ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದ ಅಡಿಯಲ್ಲಿ ಜನರಲ್ಲಿ ಕುಷ್ಠರೋಗದ ಕುರಿತು ಅರಿವು ಮೂಡಿಸಲು, ರಾಷ್ಟ್ರದಾದ್ಯಂತ ಇಂದಿನಿಂದ ಫೆ.13 ರವರೆಗೆ 'ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ' ನಡೆಸಲಾಗುತ್ತದೆ. ಇದರ ಅಂಗವಾಗಿ ಹಾವೇರಿ ಜಿಲ್ಲೆಯಲ್ಲೂ ಕುಷ್ಠರೋಗ ಅರಿವು ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದರು.

ಅಭಿಯಾನದ ಕುರಿತು ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ, ಶಾಲಾ– ಕಾಲೇಜು, ವಸತಿ ಶಾಲೆಗಳು ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ಅರಿವು ಮೂಡಿಸಲಾಗುತ್ತಿದೆ. ಜೊತೆಗೆ ಜಿಲ್ಲಾ ಹಾಗೂ ತಾಲೂಕು ಮಟ್ಟಗಳಲ್ಲಿ ಪರಿಣಾಮಕಾರಿಯಾಗಿ ಕುಷ್ಠರೋಗ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಡಾಕ್ಟರ್ ಚನ್ನಬಸಯ್ಯ ವಿರಕ್ತಮಠ ಮಾಹಿತಿ ನೀಡಿದ್ದಾರೆ. **ಗದಗ** ಜಿಲ್ಲೆಯಲ್ಲಿ ಇಂದಿನಿಂದ ಫೆಬ್ರುವರಿ 13 ರವರೆಗೆ ಕುಷ್ಟರೋಗ ಜಾಗೃತಿ ಅಭಿಯಾನ ಆಯೋಜಿಸಲಾಗಿದ್ದು, ಈ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನದ ಪಾಕ್ಷಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕುಷ್ಟರೋಗದ ಕುರಿತು ಜನಸಾಮಾನ್ಯರಲ್ಲಿ ಭಯ ಬೇಡ. ಕುಷ್ಟರೋಗವನ್ನು ಶೀಘ್ರವಾಗಿ ಪತ್ತೆ ಹಚ್ಚುವುದು ಮುಖ್ಯವಾಗಿದೆ. ಕುಷ್ಟರೋಗಕ್ಕೆ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆಯನ್ನು ನೀಡಲಾಗುತ್ತದೆ. ಸಮಾಜದ ಮುಖ್ಯವಾಹಿನಿಯಲ್ಲಿ ಕುಷ್ಟರೋಗಿಗಳು ಗೌರವಯುತವಾಗಿ ಬದುಕಲು ಅವಕಾಶ ನೀಡಬೇಕು. ಈ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಂಡು ಯಶಸ್ವಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ವೇಳೆ ಕುಷ್ಠರೋಗ ಜಾಗೃತಿ ಕುರಿತಾದ ಬಿತ್ತಿಪತ್ರವನ್ನು ಅವರು ಬಿಡುಗಡೆಗೊಳಿಸಿದರು. 'ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ' ಅಂಗವಾಗಿ ನಾಳೆ **ಕಾರವಾರ**ದ ಜಿಲ್ಲಾಧಿಕಾರಿ ಕಚೇರಿಯ ಆವರಣದಲ್ಲಿ ಪ್ರತಿಜ್ಞಾವಿಧಿ ಸ್ವೀಕಾರ, ನಂತರ ಜಿಲ್ಲಾಧಿಕಾರಿರವರ ಕಚೇರಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಕಚೇರಿಯವರೆಗೆ ಕುಷ್ಠರೋಗ ಅರಿವು ಮೂಡಿಸುವ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ತಿಳಿಸಿದ್ದಾರೆ.

****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇದೇ ಶನಿವಾರ ಬಜೆಟ್ ಮಂಡಿಸಲಿದ್ದಾರೆ. ಜನಸಾಮಾನ್ಯರು, ರೈತರು ಸೇರಿದಂತೆ ಎಲ್ಲರೂ ಬಜೆಟ್ ಮೇಲೆ ಹಲವಾರು ನಿರೀಕ್ಷೆ ಇಟ್ಟುಕೊಂಡಿದ್ದಾರೆ.

ಆಕಾಶವಾಣಿ ಜೊತೆ ಮಾತನಾಡಿದ ಹಿರಿಯ ಆರ್ಥಿಕ ತಜ್ಞ ನಾರಾಯಣ ಯಾಗಿ, ಈ ಬಾರಿಯ ಬಜೆಟ್ ದೇಶದ ಜಿಡಿಪಿ ಬೆಳವಣಿಗೆ ಎರಡಂಕಿ ದಾಟುವಂತಿರಬೇಕು. ಜೊತೆಗೆ ಉದ್ಯೋಗಸೃಷ್ಟಿ, ಸಣ್ಣ ಹಾಗೂ ಸೂಕ್ಷ್ಮ ಕೈಗಾರಿಕೆಗಳಿಗೆ ಒತ್ತು ನೀಡುವಂತೆ ಮನವಿ ಮಾಡಿದ್ದಾರೆ.

****************

ದೇಶದೆಲ್ಲೆಡೆ ಸ್ವಚ್ಛತೆ ಇರಬೇಕು ಎಂಬುದು ಮಹಾತ್ಮ ಗಾಂಧೀಜಿಯವರ ಕನಸಾಗಿತ್ತು. ಹೀಗಾಗಿ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಿ, ಅವರ ಕನಸನ್ನು ನನಸು ಮಾಡಲು ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ಮನವಿ ಮಾಡಿದ್ದಾರೆ.

****************

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಕ್ರೀಡಾಕೂಟದ ಮಹಿಳೆಯರ ರಸ್ತೆ ಸ್ಕೈಕ್ಲಿಂಗ್‌ನಲ್ಲಿ ರಾಜ್ಯದ ಮೇಘಾ ಗೂಗಾಡ ಕಂಚಿನ ಪದಕ ಗೆದ್ದಿದ್ದಾರೆ. ವಿಜಯಪುರದ ಮೇಘಾ 45 ನಿಮಿಷ 53 ಸೆಕೆಂಡ್‌ಗಳಲ್ಲಿ ಗುರಿ ತಲುಪಿ 3ನೇ ಸ್ಥಾನಕ್ಕೆ ತೃಪ್ತಿ ಪಟ್ಟರೆ, ಮಹಾರಾಷ್ಟ್ರದ ಪೂಜಾ ಬಬನ್ ದಾನೊಲೆ ಚಿನ್ನ ಮತ್ತು ರಾಜಸ್ಥಾನದ ಮೋನಿಕಾ ಜಾಟ್ ಬೆಳ್ಳಿ ಪದಕ ತಮ್ಮದಾಗಿಸಿಕೊಂಡಿದ್ದಾರೆ.

****************

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜು, ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿನ ಸ್ಮಾರಕಗಳಿಗೆ ಇಂದು ಭೇಟಿ ನೀಡಿ ಪರಿಶೀಲಿಸಿದರು.

****************

ಮಕ್ಕಳ ಸಮಸ್ಯೆಗಳಿಗೆ ಚುರುಕಾಗಿ, ರಚನಾತ್ಮಕವಾಗಿ ಹಾಗೂ ಸಕಾಲಕ್ಕೆ ಸ್ಪಂದಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ್ ಕೋಸಂಬೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಯಾದಗಿರಿ ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ 'ಶಾಲೆಯ ಜೊತೆಗೆ ಶಿಕ್ಷಣದಲ್ಲಿದೆ ಮಕ್ಕಳ ರಕ್ಷಣೆ' ಎಂಬ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳು ಅನುಭವಿಸುತ್ತಿರುವ ಸಂಕಷ್ಟಗಳನ್ನು ಅವರಿಂದಲೇ ನೇರವಾಗಿ ಪಡೆದು, ಅವುಗಳಿಗೆ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಇಂತಹ ವಿಶೇಷ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಮಕ್ಕಳು ಅನುಭವಿಸುವಂತಹ ಕಷ್ಟಗಳಿಗೆ ಅಧಿಕಾರಿಗಳು ಸಕಾಲಕ್ಕೆ ಪರಿಹಾರ ದೊರಕಿಸಬೇಕು. ಸಕಾಲಕ್ಕೆ ಪರಿಹಾರ ದೊರೆಯದಿದ್ದ ಸಂದರ್ಭದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮೂಲಕ ನ್ಯಾಯ ಒದಗಿಸಲು ಹಲವು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಉಚಿತ ಕಡ್ಡಾಯ ಶಿಕ್ಷಣ ಕಾಯ್ದೆ 2009 ಸಮರ್ಪಕ ಜಾರಿ, ಮಕ್ಕಳ ಮೇಲಿನ ದೌರ್ಜನ್ಯ ನಿಯಂತ್ರಣ ಕಾಯ್ದೆಗಳ ಪರಿಣಾಮಕಾರಿ ಅನುಷ್ಠಾನ ಮುಖ್ಯವಾಗಿದ್ದು, ಅಧಿಕಾರಿಗಳ ಪಾತ್ರ ಅಪಾರವಾಗಿದೆ. ಈ ದಿಸೆಯಲ್ಲಿ ಮಕ್ಕಳ ಸಮಸ್ಯೆಗಳನ್ನು ಆದ್ಯತೆ ಮೇಲೆ ಅಧಿಕಾರಿಗಳು ಪರಿಹರಿಸಬೇಕು ಎಂದು ಸೂಚನೆ ನೀಡಿದರು.

****************

ಸರ್ಕಾರದ ವಿವಿಧ ಇಲಾಖೆ ನಿಗಮ, ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ನೌಕರರು, ಕಾರ್ಮಿಕರಿಗೆ ವೇತನ ಪಾವತಿ ಮತ್ತು ಕಾನೂನಾತ್ಮಕವಾಗಿ ನೀಡಬೇಕಾದ ಸೌಲಭ್ಯಗಳನ್ನು ಒದಗಿಸಲು ದಾವಣಗೆರೆ ಜಿಲ್ಲಾ ಹೊರಗುತ್ತಿಗೆ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘವನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಗಂಗಾಧರಸ್ವಾಮಿ ಹೇಳಿದ್ದಾರೆ.

ಹೊರಗುತ್ತಿಗೆ ಸಿಬ್ಬಂದಿಯು ಸಂಘದ ಸದಸ್ಯತ್ವ ಪಡೆಯಬಹುದಾಗಿದ್ದು, ತಮ್ಮ ಇಲಾಖೆಯ ಮುಖ್ಯಸ್ಥರಿಂದ ಅರ್ಜಿ ಪಡೆದು, ನೋಂದಣಿ ಮಾಡಿಕೊಳ್ಳುವಂತೆ ಅವರು ತಿಳಿಸಿದ್ದಾರೆ.

********ಮುಕ್ತಾಯ********